ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ

822(919); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಆರೋಗ್ಯ ಕೇಂದ್ರದಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳು ಎಷ್ಟು (ವಿವರ ನೀಡುವುದು);

ಆ) ರಾಯಭಾಗ ತಾಲ್ಲೂಕಿನಲ್ಲಿ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳು ಇಲ್ಲದೆ ರೋಗಿಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಇ) ಬಂದಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ 06 ತಜ್ಞ ವೈದ್ಯರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 2 ವೈದ್ಯಾಧಿಕಾರಿ ಹುದ್ದೆಗಳು ಖಾಲಿ ಇವೆ. ಕುಡಚಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಿರಿಯ ವೈದ್ಯರು, ಸ್ತ್ರೀರೋಗ ತಜ್ಞರು, ಮಕ್ಕಳ ತಜ್ಞರು ಮತ್ತು ಜನರಲ್ ಮೆಡಿಸನ್ ತಜ್ಞರ ಹುದ್ದೆಗಳು ಖಾಲಿ ಇರುತ್ತವೆ.

ಮುಗಳಖೋಡ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಜನರಲ್ ಮೆಡಿಸನ್, ಮಕ್ಕಳ ತಜ್ಞರ ಹುದ್ದೆಗಳು ಖಾಲಿ ಇರುತ್ತವೆ.

ಸಂಸುದ್ದಿ ಮತ್ತು ಕಂಕಣವಾಡಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳು ಖಾಲಿ ಇವೆ.

ಆ) ಬಂದಿದೆ.

ಇ) ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ರಾಷ್ಟ್ರೀಯ ಗ್ರಾಮೀಣ ಆರೋಗ್ಯ

ಅಭಿಯಾನ (ಎನ್.ಆರ್.ಹೆಚ್.ಎಂ.)ರಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯ ಹುದ್ದೆಗಳಿಗೆ ಮಾಸಿಕ ₹ 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 60,000 ಗಳಂತೆ ಗೌರವ ಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಕೆ.ಹೆಚ್.ಎಸ್.ಡಿ.ಆರ್.ಪಿ ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ₹ 65,000 ಹಾಗೂ ₹ 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 5,000 ದಿಂದ ₹ 10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದಲ್ಲಿ ದಿನವೊಂದಕ್ಕೆ ₹ 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರ ಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಿದೆ.

ಸಿ.ಆ.ಸು.ಇಲಾಖೆಯು ಭಾರತ ಸಂವಿಧಾನದ ಅನುಚ್ಛೇದ 371 ಜೆ ರಡಿಯಲ್ಲಿ ನಿಯಮಗಳನ್ನು ರೂಪಿಸಿದ್ದು, ಈ ನಿಯಮಗಳನ್ವಯ ಪ್ರದೇಶವಾರು ಹುದ್ದೆಗಳ ಮಾಹಿತಿ ಸಂಗ್ರಹಿಸಿ ಈ ನಿಯಮಗಳನ್ವಯ ಇಲಾಖೆಯಲ್ಲಿ ಖಾಲಿ ಇರುವ ತಜ್ಞ ವೈದ್ಯರ, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಮತ್ತು ದಂತ ಆರೋಗ್ಯಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು.

ಬಸ್ ನಿಲ್ದಾಣಗಳಲ್ಲಿ ಮೂಲಭೂತ ಸೌಕರ್ಯ

823(920); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಯಭಾಗ ತಾಲ್ಲೂಕಿನಲ್ಲಿ ಹೊಸ ಬಸ್ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಬಂದಿದ್ದಲ್ಲಿ, ಕಂಪೌಂಡ್ ಹಾಗೂ ಸಿ.ಸಿ. ರಸ್ತೆ ಕಾಮಗಾರಿಗಾಗಿ ಅನುಷ್ಠಾನಗೊಳಿಸಲು ಟೆಂಡರ್ ಕರೆಯಲಾಗಿದೆಯೇ? ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಇ) ಬಸ್ ನಿಲ್ದಾಣದ ಪಕ್ಕ (ಪ್ರತಿ ಶನಿವಾರ) ಸಂತೆ ನಡೆಯುತ್ತಿದ್ದು, ಅಲ್ಲಿ ಕುರಿ ಮಾರಾಟದಿಂದ ಬಸ್ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಇದಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಹೌದು